All India Radio: Bangalore
Regional Bulletin In Kannada
13.01.2025 / 6.40 p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಅವಧಿ ಮೀರಿದ ಪ್ರಕರಣಗಳನ್ನೂ ಮುಂದಿನ ೬ ತಿಂಗಳೊಳಗೆ ಇತ್ಯರ್ಥಗೊಳಿಸಿ- ಉಪವಿಭಾಗಾಧಿಕಾರಿಗಳಿಗೆ ಸಚಿವ ಕೃಷ್ಣ ಬೈರೇಗೌಡ ಸೂಚನೆ
- ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧೀಕೃತ ಜಾಹಿರಾತು ಅಳವಡಿಸುವವರ ವಿರುದ್ಧ ಎಫ್ಐಆರ್ ದಾಖಲಿಸಲು ಮುಖ್ಯ ಆಯುಕ್ತರ ಸೂಚನೆ
- ಬೆಂಗಳೂರಿನಲ್ಲಿ ಹಸುವಿನ ಕೆಚ್ಚಲು ಕತ್ತರಿಸಿದ ಪ್ರಕರಣ; ಆರೋಪಿಗಳನ್ನು ಬಂಧಿಸುವಂತೆ ಬಿಜೆಪಿ ಆಗ್ರಹ
- ನಾಳೆ ನಾಡಿನೆಲ್ಲೆಡೆ ಮಕರ ಸಂಕ್ರಾಂತಿ ಸಂಭ್ರಮ; ಹಬ್ಬಕ್ಕೆ ಎಳ್ಳು, ಬೆಲ್ಲ, ಕಬ್ಬು ಖರೀದಿಯಲ್ಲಿ ತೊಡಗಿದ ಜನತೆ
- ವಿಜಯಪುರದಲ್ಲಿ ಆಲಮಟ್ಟಿ ಎಡದಂಡೆ ಕಾಲುವೆಗೆ ಜಿಗಿದು ಮಕ್ಕಳೊಂದಿಗೆ ಮಹಿಳೆ ಆತ್ಮಹತ್ಯೆ ಯತ್ನ; ನಾಲ್ವರು ಮಕ್ಕಳು ಸಾವು

***************

ಉಪ ವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ಅವಧಿ ಮೀರಿ ಬಾಕಿ ಇರುವ ಎಲ್ಲಾ ಪ್ರಕರಣಗಳನ್ನೂ ಮುಂದಿನ ಆರು ತಿಂಗಳೊಳಗಾಗಿ ಇತ್ಯರ್ಥ ಪಡಿಸಬೇಕು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಗಡುವು ನಿಗದಿಗೊಳಿಸಿದ್ದಾರೆ. ವಿಕಾಸಸೌಧದಲ್ಲಿಂದು ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜ್ಯದ ಎಲ್ಲಾ ಉಪ ವಿಭಾಗಾಧಿಕಾರಿಗಳ ಜೊತೆಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, "ಎಸಿ ನ್ಯಾಯಾಲಯಗಳಲ್ಲಿ ಯಾವ ಪ್ರಕರಣಗಳನ್ನೂ ಆರು ತಿಂಗಳ ಅವಧಿಗಿಂತ ಹೆಚ್ಚಿನ ಕಾಲ ಇಟ್ಟುಕೊಳ್ಳುವಂತಿಲ್ಲ ಎಂಬ ಕಾನೂನಿದೆ. ಎಲ್ಲಾ ಪ್ರಕರಣಗಳನ್ನೂ ಮುಂದಿನ ಒಂದು ವರ್ಷದಲ್ಲಿ ಇತ್ಯರ್ಥಗೊಳಿಸುವಂತೆ ತಿಳಿಸಿದ್ದಾರೆ.

ಎಸಿ ನ್ಯಾಯಾಲಯಗಳಲ್ಲಿ ಇನ್ನೂ ೨೯ ಸಾವಿರಕ್ಕೂ ಅಧಿಕ ಪ್ರಕರಣಗಳು ಬಾಕಿ ಇದ್ದು, ಜನ ಸಾಮಾನ್ಯರು ಸಾಕಷ್ಟು ಸಮಸ್ಯೆಗಳನ್ನು ಅನುಭವಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಅಭಿಯಾನ ಮಾದರಿಯಲ್ಲಿ ಕೆಲಸಕ್ಕೆ ಮುಂದಾಗಬೇಕು" ಎಂದು ಕರೆ ನೀಡಿದ್ದಾರೆ.

ಪ್ರಕರಣಗಳ ವಿಲೇವಾರಿಯ ಜೊತೆಗೆ ಪೋಡಿ ದುರಸ್ತಿ, ಪೌತಿ ಖಾತೆ ಆಂದೋಲನ ಉಪ ವಿಭಾಗಾಧಿಕಾರಿಗಳ ಮಟ್ಟದಲ್ಲೇ ನಡೆಯಬೇಕು. ಹೀಗಾಗಿ ಅಧಿಕಾರಿಗಳು ಜನರ ಸಮಸ್ಯೆ ಹಾಗೂ ತಮ್ಮ ಜವಾಬ್ದಾರಿಗಳನ್ನು ಗಮನದಲ್ಲಿಟ್ಟುಕೊಂಡು ಎಲ್ಲಾ ಕೆಲಸಗಳನ್ನೂ ಅಭಿಯಾನ ಮಾದರಿಯಲ್ಲಿ ನಡೆಸಬೇಕು" ಎಂದು ಅವರು ಸಲಹೆ ನೀಡಿದ್ದಾರೆ.

****************

ಇದೇ ೨೧ರಂದು ಬೆಳಗಾವಿಯಲ್ಲಿ ಜೈ ಬಾಪು-ಜೈ ಭೀಮ್-ಜೈ ಸಂವಿಧಾನದ ಐತಿಹಾಸಿಕ ಅಭಿಯಾನ ನಡೆಯಲಿದ್ದು, ಯಶಸ್ವಿಯಾಗಿ ನಡೆಸುವಂತೆ ಪಕ್ಷದ ಕಾರ್ಯಕರ್ತರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ.

ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ನಡೆದ ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಹೋರಾಟ, ತ್ಯಾಗ, ಬಲಿದಾನಗಳಿಂದ ಕಟ್ಟಿದ ಪಕ್ಷವಾಗಿದೆ ಎಂದು ತಿಳಿಸಿದ್ದಾರೆ.

ದೇಶದ ಸ್ವಾತಂತ್ರ್ಯ ಮತ್ತು ಸಂವಿಧಾನದ ಬಗ್ಗೆ ಗೌರವ ಇರುವ ಎಲ್ಲರಿಗೂ, ಸಮಾವೇಶಕ್ಕೆ ಸ್ವಾಗತ ಎಂದು ಹೇಳಿದ್ದಾರೆ. ಸಭೆಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ, ಕೆಪಿಸಿಸಿ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ಸಚಿವರು ಭಾಗಿಯಾಗಿದ್ದರು.

****************

ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತ ಜಾಹೀರಾತುಗಳನ್ನು ಅಳವಡಿಸಿರುವವರ ವಿರುದ್ಧ ಎಫ್.ಐ.ಆರ್ ದಾಖಲಿಸಲು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿ ನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬಿಬಿಎಂಪಿ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ನಡೆದ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಪಾಲಿಕೆಯ ಎಲ್ಲಾ ೮ ವಲಯಗಳಲ್ಲಿ ಅನಧಿಕೃತ ಜಾಹೀರಾತುಗಳನ್ನು ಅಳವಡಿಸಿರುವುದನ್ನು ತೆರವುಗೊಳಿಸಿ, ಅಳವಡಿಸಿರುವವರ ವಿರುದ್ಧ ಎಫ್.ಐ.ಆರ್ ದಾಖಲಿಸಬೇಕು ಎಂದು ತಿಳಿಸಿದ್ದಾರೆ.

ಆಸ್ತಿ ತೆರಿಗೆಯಿಂದ ಹೊರಗುಳಿದ ಆಸ್ತಿಗಳನ್ನು ಆಸ್ತಿ ತೆರಿಗೆ ವ್ಯಾಪ್ತಿಗೆ ತರಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

***************

೧೨ ವರ್ಷಗಳಿಗೊಮ್ಮೆ ಪ್ರಯಾಗ್‌ರಾಜ್‌ನಲ್ಲಿ ನಡೆಯುವ ಮಹಾ ಕುಂಭಮೇಳಕ್ಕೆ ಅದ್ಧೂರಿ ಚಾಲನೆ ದೊರೆತಿದ್ದು, ಜಗತ್ತಿನ ಅತೀ ದೊಡ್ಡ ಧಾರ್ಮಿಕ ಪವಿತ್ರ ಕಾರ್ಯಕ್ರಮದಲ್ಲಿ ಬರೊಬ್ಬರಿ ೪೫ ಕೋಟಿ ಭಕ್ತರು ಪಾಲ್ಗೊಳ್ಳಲಿದ್ದಾರೆ. ಇಂದು ಸುಮಾರು ೧ ಕೋಟಿ ೬೦ ಮಂದಿ ಪುಣ್ಯ ಸ್ನಾನ ಮಾಡಿದ್ದಾರೆ.

ಜನವರಿ ೧೩ರಿಂದ ಫೆಬ್ರುವರಿ ೨೬ರವರೆಗೆ ೪೫ ದಿನ ನಡೆಯುವ ಮೇಳದಲ್ಲಿ ದೇಶ-ವಿದೇಶಗಳಿಂದ ಭಕ್ತರು ಭಾಗವಹಿಸಲಿದ್ದಾರೆ.

ಅಹಿತಕರ ಘಟನೆಗಳು ನಡೆಯದಂತೆ ಸಾಮಾಜಿಕ ಮಾಧ್ಯಮಗಳ ಮೇಲೆ ತೀವ್ರ ನಿಗಾ ಇಡಲಾಗಿದೆ. ಸಂಗಮ್ ಪ್ರದೇಶದಲ್ಲಿ ದಿನದ ೨೪ ಗಂಟೆ ಕಣ್ಗಾವಲು ಒದಗಿಸಲು ನಗರದಾದ್ಯಂತ ೧೦೦ ಮೀಟರ್ ವರೆಗೆ ಡೈವಿಂಗ್ ಸಾಮರ್ಥ್ಯವಿರುವ ಅಂಡರ್ ವಾಟರ್ ಡ್ರೋನ್‌ಗಳನ್ನು ನಿಯೋಜಿಸಲಾಗಿದೆ. ಈ ವಿಶೇಷ ಡ್ರೋನ್ ಗಳ ಜೊತೆ ೧೨೦ ಮೀಟರ್ ಎತ್ತರವನ್ನು ತಲುಪುವ ಸಾಮರ್ಥ್ಯವಿರುವ ಟೆಥರ್ಡ್ ಡ್ರೋನ್‌ಗಳನ್ನು ನಿಯೋಜಿಸಲಾಗಿದೆ.

ಭಕ್ತರಿಗೆ ನೈಜ-ಸಮಯದ ಮಾರ್ಗದರ್ಶನ ಮತ್ತು ನವೀಕರಣಗಳನ್ನು ಒದಗಿಸಲು ಎ ಐ ವಿನ್ಯಾಸಗೊಳಿಸಲಾಗಿದೆ. ಇದು ಲಕ್ಷಾಂತರ ಭಕ್ತರಿಗೆ ಡಿಜಿಟಲ್ ಒಡನಾಡಿಯಾಗಿ ಕಾರ್ಯನಿರ್ವಹಿಸಲಿದೆ.

ಈ ಕುರಿತಂತೆ ಆಕಾಶವಾಣಿಯೊಂದಿಗೆ ಕುಂಭಮೇಳದಲ್ಲಿ ಬಳಸಿರುವ ಕೃತಕಬುದ್ಧಿಮತ್ತೆ ತಂತ್ರಜ್ಞಾನದ ಸಲಹೆಗಾರರಾದ ಡಾ.ಉದಯ ಶಂಕರ್ ಪುರಾಣಿಕ್ ಮಾಹಿತಿ ಹಂಚಿಕೊಂಡಿದ್ದಾರೆ.

ಧ್ವನಿ: ಡಾ.ಉದಯ ಶಂಕರ್ ಪುರಾಣಿಕ್, ಸಂಸ್ಥೆಯ ನಿರ್ದೇಶಕ

****************

ಚಾಮರಾಜಪೇಟೆಯಲ್ಲಿ ಹಸುಗಳ ಕೆಚ್ಚಲು ಕತ್ತರಿಸಿದ ಘಟನೆಯ ಹಿಂದೆ ಇರುವವರನ್ನು ರಾಜ್ಯ ಸರ್ಕಾರ ಪತ್ತೆ ಮಾಡಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಈಗಾಗಲೇ ಓರ್ವನನ್ನು ಬಂಧಿಸಿದ್ದು, ಈತನ ಹಿಂದೆ ಯಾರಿದ್ದಾರೆ ಎಂದು ಪತ್ತೆಹಚ್ಚುವಂತೆ ಒತ್ತಾಯಿಸಿದ್ದಾರೆ.

ಈ ಪ್ರಕರಣವನ್ನು ಮುಚ್ಚಿ ಹಾಕಲು ಕಾಂಗ್ರೆಸ್ ಪ್ರಯತ್ನಿಸುತ್ತಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ.

ಹಸುಗಳ ಕೆಚ್ಚಲನ್ನು ಕತ್ತರಿಸಿರುವುದು ಅತ್ಯಂತ ಹೇಯ, ಅಮಾನುಷ ಕೃತ್ಯವಾಗಿದೆ. ವಿಕೃತಿ ಮೆರೆದಿರುವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಬಿಜೆಪಿ ಕೋಲಾರ ರೈತ ಮೋರ್ಚಾ ಜಿಲ್ಲಾ ಅಧ್ಯಕ್ಷ ಕೊಮ್ಮನಹಳ್ಳಿ ಆನಂದ್ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

****************

ಧಾರವಾಡ ಜಿಲ್ಲೆಯ ನೂಲ್ವಿ-ಬೆಳಗಲಿ ಕ್ರಾಸ್ ಬಳಿಯಲ್ಲಿನ ಸಾವು- ನೋವು ತಪ್ಪಿಸುವ ಉದ್ದೇಶದಿಂದ ಕೇಂದ್ರ ಸರ್ಕಾರದ ನೇತೃತ್ವದಲ್ಲಿ ೧೨ ಕೋಟಿ ೫೫ ಲಕ್ಷ ವೆಚ್ಚದಲ್ಲಿ ಅಂಡರ್ ಪಾಸ್ ನಿರ್ಮಾಣಕ್ಕೆ ಭೂಮಿ ಪೂಜೆ ನಡೆಸಲಾಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ತಿಳಿಸಿದ್ದಾರೆ.

ನೂಲ್ವಿ ಕ್ರಾಸ್ ಬಳಿಯಲ್ಲಿ ಭೂಮಿ ಪೂಜೆ ನೆರವೇರಿಸಿದ ಬಳಿಕ ಮಾತನಾಡಿದ ಅವರು, ಕುಂದಗೋಳ ಭಾಗದಲ್ಲಿಯೇ ಹೆಚ್ಚು ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಮಾಡಿರುವುದು ವಿಶೇಷವಾಗಿದೆ ಎಂದರು.

ರಿಂಗ್ ರೋಡ್ ಸಮಸ್ಯೆಗಳ ಕೂಡಲೇ ಪರಿಶೀಲನೆ ನಡೆಸಿ ಜನರ ಸಮಸ್ಯೆ ಏನೇ ಇದ್ದರೂ ತಕ್ಷಣವೇ ಸ್ಪಂದಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

ಧ್ವನಿ: ಪ್ರಲ್ಹಾದ್ ಜೋಶಿ

***************

ನಾಳೆ ಸಂಕ್ರಾಂತಿ ಹಿನ್ನೆಲೆಯಲ್ಲಿ ನಾಡಿನೆಲ್ಲೆಡೆ ಹಬ್ಬದ ಸಂಭ್ರಮ ಮನೆ ಮಾಡಿದೆ. ಬೆಂಗಳೂರಿನ ಗವಿ ಗಂಗಾಧರೇಶ್ವರ ದೇವಾಲಯದಲ್ಲಿ ನಾಳೆ ಸಂಜೆ ೫.೨೦ ರಿಂದ ೫.೨೩ ನಿಮಿಷದ ವರೆಗೆ ಶಿವಲಿಂಗಕ್ಕೆ ಸೂರ್ಯ ರಷ್ಮಿ ಸ್ಪರ್ಷಿಸಲಿದೆ.

ಈ ಕುತೂಹಲಕ್ಕೆ ಸಾಕ್ಷಿಯಾಗಲು ಸಾವಿರಾರು ಮಂದಿ ಕಾತುರಿಂದ ಕಾಯುತ್ತಿದ್ದಾರೆ.

ರಾಜ್ಯದ ಜನತೆಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಮಕರ ಸಂಕ್ರಾಂತಿ ಹಬ್ಬದ ಶುಭಾಶಯ ತಿಳಿಸಿದ್ದಾರೆ.

ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ದೇವಲಾಪುರ ಗ್ರಾಮದಲ್ಲಿ "ಸಂಕ್ರಾಂತಿ ಸಂಭ್ರಮ" ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ.

***************

ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಆಲಮಟ್ಟಿ ಎಡದಂಡೆ ಮುಖ್ಯ ಕಾಲುವೆಗೆ ಜಿಗಿದು ಮಹಿಳೆಯೊಬ್ಬಳು ತನ್ನ ನಾಲ್ವರು ಮಕ್ಕಳೊಂದಿಗೆ ಆತ್ಮಹತ್ಯೆಗೆ ಯತ್ನಿಸಿದ್ದಾಳೆ. ಘಟನೆಯಲ್ಲಿ ನಾಲ್ವರು ಮಕ್ಕಳು ಸಾವಿಗೀಡಾಗಿದ್ದಾರೆ. ಮಹಿಳೆಯನ್ನು ಸ್ಥಳೀಯರು ರಕ್ಷಿಸಿದ್ದಾರೆ.

ಸಾವಿಗೀಡಾದವರನ್ನು ಕೊಲ್ಹಾರ ತಾಲ್ಲೂಕಿನ ತೆಲಗಿ ಗ್ರಾಮದ ತನು ನಿಂಗರಾಜ ಭಜಂತ್ರಿ, ರಕ್ಷಾ ನಿಂಗರಾಜ ಭಜಂತ್ರಿ ಹಾಗೂ ಅವಳಿ ಮಕ್ಕಳಾದ ಹಸೇನ ನಿಂಗರಾಜ ಭಜಂತ್ರಿ, ಹುಸೇನ ನಿಂಗರಾಜ ಭಜಂತ್ರಿ ಎಂದು ಗುರುತಿಸಲಾಗಿದೆ.

ಕೌಟುಂಬಿಕ ಕಲಹದಿಂದ ನೊಂದ ಮಹಿಳೆ ತನ್ನ ನಾಲ್ವರು ಮಕ್ಕಳೊಂದಿಗೆ ಕಾಲುವೆಗೆ ಜಿಗಿದು ಆತ್ಮಹತ್ಯೆಗೆ ಯತ್ನಿಸಿದ್ದಾರೆ. ನಿಡಗುಂದಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

***************

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆಯ ಕಲ್ಯಾಣ ಕರ್ನಾಟಕ ವಿಭಾಗದ ದ್ವಿತೀಯ ಜಾಂಬೋರೇಟ್, ಯಾದಗಿರಿ ನಗರದಲ್ಲಿ ಜನವರಿ ೧೬ ರಿಂದ ಜನವರಿ ೨೧ ರವರೆಗೆ

ನಡೆಯಲಿದೆ. ಈ ಐತಿಹಾಸಿಕ ಜಾಂಬೋರೇಟ್ ಯಶಸ್ವಿಗೊಳಿಸಲು ಸಿದ್ಧತೆ ಕಾರ್ಯಗಳು ಪೂರ್ಣಗೊಂಡಿದೆ ಎಂದು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ನ ಯಾದಗಿರಿ ಜಿಲ್ಲಾ ಸಂಸ್ಥೆಯ ಅಧ್ಯಕ್ಷ ಸುರೇಶ್ ಸಜ್ಜನ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ: ಸುರೇಶ್ ಸಜ್ಜನ್, ಜಿಲ್ಲಾ ಅಧ್ಯಕ್ಷರು, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್,

****************

ಬನದ ಹುಣ್ಣಿಮೆ ಪ್ರಯುಕ್ತ ಇಂದು ಪ್ರಸಿದ್ಧ ಸವದತ್ತಿ ಎಲ್ಲಮ್ಮ ದೇವಿ ಬೃಹತ್ ಜಾತ್ರೆ ನಡೆಯಿತು. ಜಾತ್ರೆಗೆ ಮಹಾರಾಷ್ಟ್ರ ಸೇರಿದಂತೆ ಹುಬ್ಬಳ್ಳಿ, ಧಾರವಾಡ, ಬೆಳಗಾವಿ ರಾಜ್ಯದ ಇತರೆಡೆಯಿಂದ ಬೃಹತ್ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದೇವಿಯ ದರ್ಶನ ಪಡೆದುಕೊಂಡರು. ಭಕ್ತರ ಅನುಕೂಲಕ್ಕಾಗಿ ಸಾರಿಗೆ ಇಲಾಖೆ ವಿಶೇಷ ಬಸ್ಸಿನ ಸೌಕರ್ಯ ಕಲ್ಪಿಸಲಾಗಿತ್ತು.

********ಮುಕ್ತಾಯ********